# ಕರ್ನಾಟಕ ಸರ್ಕಾರ

ಸಂ:ಗ್ರಾಅಪ/06/ಗ.ಕೋಶ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:27.05.2016.

## ಅಧಿಕೃತ ಜ್ಞಾಪನ

**ವಿಷಯ:** ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ನಿರ್ಮಿತಿ ಕೇಂದ್ರಕ್ಕೆ ನೋಡಲ್ ಅಧಿಕಾರಿಯನ್ನು ನೇಮಿಸುವ ಬಗ್ಗೆ.

**ಉಲ್ಲೇಖ:** 1. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿ.ಪಂ., ದಕ್ಷಿಣ ಕನ್ನಡ, ಮಂಗಳೂರು ಇವರ ಪತ್ರ ಸಂಖ್ಯೆ:ದಕಜಿಪ/ಇತರ/ಸಿಆರ್-1/2014-15, ದಿನಾಂಕ:26.06.2015 ಮತ್ತು 19.10.2015.

2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ/30/ಗ.ಕೋಶ/2015, ದಿನಾಂಕ:24.09.2015

*****

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಲಾಗುತ್ತಿದ್ದು, ಪ್ರಗತಿಯನ್ನು ಕಾಲಕಾಲಕ್ಕೆ ಪರಿಶೀಲನೆ ಮಾಡಬೇಕಾಗಿರುತ್ತದೆ. ಉಲ್ಲೇಖ (1) ರಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿ.ಪಂ, ದಕ್ಷಿಣ ಕನ್ನಡ, ಮಂಗಳೂರು ಇವರ ಕೋರಿಕೆಯಂತೆ ನಿರ್ಮಿತಿ ಕೇಂದ್ರದ ವತಿಯಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಘನ ಮತ್ತು ದ್ರವ್ಯ ತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಆರೋಹಿಸಲು NIC ಯವರು user id & password ನ್ನು ತಂತ್ರಾಂಶದಲ್ಲಿ ಒದಗಿಸಿರುತ್ತಾರೆ.

ಈ ಬಗ್ಗೆ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಲಾಗಿನ್ ಅನ್ನು ಒದಗಿಸಲು ರಾಜ್ಯ ಮಟ್ಟದಲ್ಲಿ ನೋಡಲ್ ಅಧಿಕಾರಿಯನ್ನು ನೇಮಿಸುವುದು ಅಗತ್ಯವಾಗಿದೆ. ಆದರಂತೆ ಈ ಕೆಳಕಂಡ ಅಧಿಕಾರಿಯವರನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ನಿರ್ಮಿತಿ ಕೇಂದ್ರಕ್ಕೆ ರಾಜ್ಯ ಮಟ್ಟದಲ್ಲಿ ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. ಸದರಿ ಅಧಿಕಾರಿಯವರು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಶಿಸ್ತುಬದ್ಧ ನಿರ್ವಹಣೆ ಮತ್ತು ಪ್ರಗತಿಯ ಮೇಲ್ವಿಚಾರಣೆಗೆ NIC ಹಾಗೂ ಇಲಾಖೆಯೊಂದಿಗೆ ಕಾಲಕಾಲಕ್ಕೆ co-ordinate ಮಾಡುವುದು ಹಾಗೂ ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ನಿರ್ಮಿತಿ ಕೇಂದ್ರದ ಲಾಗಿನ್ ಅನ್ನು ಒದಗಿಸುವುದು.

| ಇಲಾಖೆ/ವಿಭಾಗ/ಸಂಸ್ಥೆ | ಹೆಸರು ಮತ್ತು ಪದನಾಮ |
|---|---|
| ನಿರ್ಮಿತಿ ಕೇಂದ್ರ | ಶ್ರೀ ಎಸ್ ಟಿ ಕುಮಾರ್, ಉಪ ನಿರ್ದೇಶಕರು, ನಿರ್ಮಿತಿ ಕೇಂದ್ರ, ಬೆಂಗಳೂರು |

.....2

ಈ ಮೇಲ್ಕಂಡ ಅಧಿಕಾರಿ ವರ್ಗಾವಣೆ/ನಿವೃತ್ತಿ ಹೊಂದಿದ್ದಲ್ಲಿ ಸದರಿ ಹುದ್ದೆಗೆ ನೇಮಕಗೊಂಡ ಅಧಿಕಾರಿಗಳೇ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ನಿರ್ಮಿತಿ ಕೇಂದ್ರದ ನೋಡಲ್ ಅಧಿಕಾರಿಯಾಗಿ ಮುಂದುವರೆಯುತ್ತಾರೆ.

(ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರಿಂದ
ಅನುಮೋದಿತ)

(ಮಹದೇವ)
ನಿರ್ದೇಶಕರು (ಇ-ಆಡಳಿತ) ಹಾಗೂ
ಪ/ನಿ ಸರ್ಕಾರದ ಉಪಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಶ್ರೀ ಎಸ್ ಟಿ ಕುಮಾರ್, ಉಪ ನಿರ್ದೇಶಕರು, ನಿರ್ಮಿತಿ ಕೇಂದ್ರ, ಬೆಂಗಳೂರು.
2. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್ಐಸಿ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ವಿಶೇಷ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ.
3. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಗ್ರಾಅಪ ಇಲಾಖೆ.
4. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ ಆನಂದರಾವ್ ವೃತ್ತ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
8. ಗ್ರಾಅಪ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ.
9. ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ), ಗ್ರಾಅಪ ಇಲಾಖೆ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪ ಇಲಾಖೆ, ಬೆಂಗಳೂರು.